ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 53 ಸೇವನೆ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:19.08.2021

3028920
30 28920
16 SEP 2021
ಬೆಂಗಳೂರು.

## ಸುತ್ತೋಲೆ

ವಿಷಯ: ದಿನಾಂಕ 22.03.2022 ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ:ಸಿಆಸುಇ 11 ಸೇವನೆ 2020, ದಿನಾಂಕ:15.05.2020.

****

ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ ನಿಯಮ 1(3)ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿ ಇನ್ನಿತರ ಎಲ್ಲಾ ಅಭ್ಯರ್ಥಿಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಕಡ್ಡಾಯಗೊಳಿಸಿದೆ. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದ್ದು ಎಂಬುದಾಗಿದ್ದು, ಪ್ರಸ್ತುತ ಸರ್ಕಾರದಿಂದ ಅನುಮೋದಿಸಲ್ಪಟ್ಟ ಕಿಯೋನಿಕ್ಸ್ ಸಂಸ್ಥೆಯ ಮೂಲಕ ನಡೆಸಲಾಗುತ್ತಿದೆ. ನೇರ ನೇಮಕಾತಿ ಹೊಂದಿರುವ ಮತ್ತು ಸೇವಾ ನಿರತ ಸರ್ಕಾರಿ ನೌಕರರುಗಳು ನಿಗದಿಪಡಿಸಿರುವ ಅಂಕಗಳನ್ನು ಪಡೆದು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾಗಬೇಕಾಗಿರುತ್ತದೆ.

ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಕಾಲಮಿತಿಯನ್ನು ಕಾಲಕಾಲಕ್ಕೆ ವಿಸ್ತರಿಸಲಾಗಿದೆ. ಮೇಲ್ಕಂಡ ಉಲ್ಲೇಖದಲ್ಲಿನ ಅಧಿಸೂಚನೆಯನ್ವಯ ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ದಿನಾಂಕ:22.3.2022 ರೊಳಗೆ ತೆಗೆದುಕೊಂಡು ಉತ್ತೀರ್ಣರಾಗಬೇಕಾಗುತ್ತದೆ. ಸದರಿ ದಿನಾಂಕದ ನಂತರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಲು ಬಾಕಿ ಇರುವ ಸರ್ಕಾರಿ ನೌಕರರು ಕೂಡಲೇ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗುವಂತೆ ಸೂಚಿಸಲಾಗಿದೆ.

ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಮೇಲ್ಕಂಡ ಸೂಚನೆಯನ್ನು ತಮ್ಮ ಅಧೀನಕ್ಕೊಳಪಡುವ ನೌಕರರ ಗಮನಕ್ಕೆ ತರುವಂತೆ ಈ ಮೂಲಕ ತಿಳಿಸಲಾಗಿದೆ.

Thejavathi 19/8/2021
(ತೇಜಾವತಿ,ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷ ಕೋಶ).

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ-ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ:31, ವಿಧಾನಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

...2...

ADM-3



ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯುವರು ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ ಕಾರ್ಯದರ್ಶಿಯವರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು .
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ಎಲ್ಲಾ ಇಲಾಖಾ ಮುಖ್ಯಸ್ಥರು.
8. ಎಲ್ಲಾ ಪ್ರಾದೇಶಿಕ ಆಯುಕ್ತರು.
9. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
10. * ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
16. ಎಲ್ಲಾ ಸಚಿವರ/ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
18. ಸಚಿವಾಲಯದ ಎಲ್ಲಾ ಶಾಖೆಗಳು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
20. ವಾರದ ರಾಜ್ಯಪತ್ರ.
21. ಶಾಖಾ ರಕ್ಷಾ ಕಡತ/ ಬಿಡಿ ಪ್ರತಿಗಳು.

(*ಮುಖ ಪತ್ರದೊಂದಿಗೆ)